# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: - ಉತ್ತರ ಕನ್ನಡ ಜಿಲ್ಲೆಯನ್ನು ಕಾರವಾರ ಮತ್ತು ಶಿರಸಿ ಕೇಂದ್ರ ಸ್ಥಾನಗಳುಳ್ಳ ಎರಡು ಶೈಕ್ಷಣಿಕ ಜಿಲ್ಲೆಗಳನ್ನಾಗಿ ವಿಭಜಿಸುವ ಬಗ್ಗೆ.

ಓದಲಾಗಿದೆ: - ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರ ಪ್ರಸ್ತಾವನೆ ಸಂಖ್ಯೆ: ಪಿ3 ವಿಭಜನೆ ಪ್ರಸ್ತಾವನೆ 2008-09, ದಿನಾಂಕ: 05-02-2009.

* * * * *

**ಪ್ರಸ್ತಾವನೆ: -**

1. ಮೇಲೆ ಓದಲಾದ ದಿನಾಂಕ: 05-02-2009ರ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರು ಉತ್ತರ ಕನ್ನಡ ಜಿಲ್ಲೆ ಭೌಗೋಳಿಕವಾಗಿ ಅತ್ಯಂತ ದೊಡ್ಡ ಜಿಲ್ಲೆಯಾಗಿದ್ದು, 11 ತಾಲ್ಲೂಕುಗಳನ್ನು ಹೊಂದಿರುತ್ತದೆ. ಇವುಗಳಲ್ಲಿ 05 ಕರಾವಳಿ ಪ್ರದೇಶದಲ್ಲಿ ಹಾಗೂ 06 ಮಲೆನಾಡು ಪ್ರದೇಶದಲ್ಲಿ ಬರುವವು. ಪ್ರಸ್ತುತ ಉತ್ತರ ಕನ್ನಡ ಜಿಲ್ಲೆಯ ಕೇಂದ್ರ ಸ್ಥಾನವು ಕಾರವಾರವಾಗಿದ್ದು, ಗೋವಾ ಗಡಿಭಾಗಕ್ಕೆ ಹೊಂದಿಕೊಂಡಿರುವುದರಿಂದ ಮುಂಡಗೋಡ, ಸಿದ್ಧಾಪುರ ತಾಲ್ಲೂಕುಗಳು ಜಿಲ್ಲಾ ಸ್ಥಾನದಿಂದ ದೂರ ಇರುವುದರಿಂದ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಶಿಕ್ಷಕರಿಗೆ ಮತ್ತು ಸಾರ್ವಜನಿಕರಿಗೆ ಜಿಲ್ಲಾ ಕೇಂದ್ರ ಸ್ಥಾನಕ್ಕೆ ಹೋಗಿಬರಲು ತೊಂದರೆಯಾಗುತ್ತದೆ. ಹಾಗೂ ಉಪನಿರ್ದೇಶಕರಿಗೆ 11 ತಾಲ್ಲೂಕುಗಳ ಪರಿವೀಕ್ಷಣೆ ಮಾಡಲು ಆಡಳಿತಾತ್ಮಕವಾಗಿ ಅನಾನುಕೂಲವಾಗುತ್ತಿದೆ. ವಿಶಿಷ್ಟ ಭೌಗೋಳಿಕ ಕಾರಣಗಳಿಂದಾಗಿ ಜಿಲ್ಲಾ ಕೇಂದ್ರದಿಂದ ತಾಲ್ಲೂಕುಗಳಿಗೆ ಪ್ರವಾಸ ಕೈಗೊಳ್ಳುವಲ್ಲಿ ಬಹಳ ಸಮಯ ವ್ಯಯ ಆಗುತ್ತದೆ. ಶಾಲೆಗಳ ಪರಿಣಾಮಕಾರಿ ಉಸ್ತುವಾರಿ ಸಾಧ್ಯವಾಗುವುದಿಲ್ಲ.

2. ಹೀಗಾಗಿ ಉತ್ತರ ಕನ್ನಡ ಜಿಲ್ಲೆಯನ್ನು ಎರಡು ಶೈಕ್ಷಣಿಕ ಜಿಲ್ಲೆಗಳನ್ನಾಗಿ ಅಂದರೆ ಶಿರಸಿ, ಸಿದ್ಧಾಪುರ, ಮುಂಡಗೋಡ, ಯಲ್ಲಾಪುರ, ಹಳಿಯಾಳ ಮತ್ತು ಜೋಯಿಡಾ ಶೈಕ್ಷಣಿಕ ಬ್ಲಾಕಗಳನ್ನು ಸೇರಿಸಿ ಶಿರಸಿ ಶೈಕ್ಷಣಿಕ ಜಿಲ್ಲೆ ಎಂದು ಹಾಗೂ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಮತ್ತು ಭಟ್ಕಳ ಈ ಶೈಕ್ಷಣಿಕ ಬ್ಲಾಕಗಳನ್ನು ಸೇರಿಸಿ ಉತ್ತರ ಕನ್ನಡ ಶೈಕ್ಷಣಿಕ ಜಿಲ್ಲೆ ಎಂದು ಪ್ರತ್ಯೇಕ ಜಿಲ್ಲೆಗಳನ್ನಾಗಿ ವಿಭಜಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

3. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ: 27 ಯೋಯೋಕ 2009 ಬೆಂಗಳೂರು, ದಿನಾಂಕ: 26-08-2009**
**[ಇಡಿ: 113 : ಸ್ಕೀಮರ(ಯುನಿಕ್) 2009, ದಿನಾಂಕ: 26-08-2009]**

4. 2009-10ನೇ ಸಾಲಿನಿಂದ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಅನ್ವಯವಾಗುವಂತೆ ಉತ್ತರ ಕನ್ನಡ ಜಿಲ್ಲೆಯನ್ನು ಉತ್ತರ ಕನ್ನಡ ಶೈಕ್ಷಣಿಕ ಜಿಲ್ಲೆ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆ ಎಂಬ ಎರಡು ಪ್ರತ್ಯೇಕ ಶೈಕ್ಷಣಿಕ ಜಿಲ್ಲೆಗಳನ್ನಾಗಿ ವಿಭಜಿಸಲು ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ಇವರಿಗೆ ಅನುಮತಿ ನೀಡಲಾಗಿದೆ.

5. ಶಿರಸಿ ಶೈಕ್ಷಣಿಕ ಜಿಲ್ಲೆಗೆ ಶಿರಸಿ, ಸಿದ್ದಾಪುರ, ಮುಂಡಗೋಡ, ಯಲ್ಲಾಪುರ, ಹಳಿಯಾಳ ಮತ್ತು ಜೋಯಿಡಾ ಶೈಕ್ಷಣಿಕ ಬ್ಲಾಕ್‌ಗಳು ಹಾಗೂ ಉತ್ತರ ಕನ್ನಡ ಶೈಕ್ಷಣಿಕ ಜಿಲ್ಲೆಗೆ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ಈ ಶೈಕ್ಷಣಿಕ ಬ್ಲಾಕುಗಳನ್ನು ಸೇರಿಸಲಾಗಿದೆ.

6. ಒಂದು ಉಪ ನಿರ್ದೇಶಕರ ಹುದ್ದೆಯನ್ನು ಅನುಬಂಧದಲ್ಲಿ ಸೂಚಿಸಿರುವಂತೆ ಸೃಜಿಸಲು ಅನುಮತಿ ನೀಡಿದೆ. ಮೂಲ ಉತ್ತರ ಕನ್ನಡ ಜಿಲ್ಲೆಯಿಂದ ಶಿರಸಿ ಶೈಕ್ಷಣಿಕ ಜಿಲ್ಲೆಗೆ 16 ಹುದ್ದೆಗಳನ್ನು ಅನುಬಂಧದಲ್ಲಿ ಸೂಚಿಸಿರುವಂತೆ ಮರುಹಂಚಿಕೆ ಮಾಡಿ ಆದೇಶಿಸಿದೆ. ಅಗತ್ಯವಿರುವ ಇತರೆ ಹುದ್ದೆಗಳನ್ನು ಮರುವಿನ್ಯಾಸಗೊಳಿಸಿ (Redeployment) ಭರ್ತಿ ಮಾಡಲು ಕ್ರಮ ವಹಿಸಲೂ ಸಹ ಸೂಚಿಸಿದೆ.

7. ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 1146 Exp-8/09 ದಿನಾಂಕ: 20.08.2009ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ಎಫ್.ಮಾಗಿ)
ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿಗಳು
ಶಿಕ್ಷಣ ಇಲಾಖೆ(ಯೋಜನೆ).

ಗೆ:-

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ.
5. ನಿರ್ದೇಶಕರು (ಪ್ರಾಥಮಿಕ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು (ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಶಿಕ್ಷಣ, ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ನಿರ್ದೇಶನಾಲಯ ಬೆಂಗಳೂರು.
9. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಬೆಳಗಾವಿ ಗುಲ್ಬರ್ಗ (ಆಯುಕ್ತರ ಮುಖಾಂತರ)
12. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಉತ್ತರ ಕನ್ನಡ.
13. ಎಲ್ಲಾ ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯಗಳು (ಆಯುಕ್ತ